| ಕರ್ನಾಟಕ ವಿಧಾನ ಪರಿಷತ್ತು | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 607(718) |
| ಮಾನ್ಯ ಸದಸ್ಯರ ಹೆಸರು | ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 18.08.2025 |
| ಉತ್ತರಿಸಬೇಕಾದ ಸಚಿವರು | ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವರು |

| ಕ್ರ.ಸ. | ಪ್ರಶ್ನೆ | ಉತ್ತರ |
|---|---|---|
| 1 | ಇತ್ತೀಚೆಗೆ ಸಂಭವಿಸುತ್ತಿರುವ ಹೃದಯಾಘಾತ ಸಾವುಗಳ ಕಾರಣದಿಂದಾಗಿ ನಿತ್ಯವೂ ನೂರಾರು ಯುವಕ ಯುವತಿಯರು ಹೃದಯ ತಪಾಸಣೆ ಸಲುವಾಗಿ ಮೈಸೂರಿನ ಜಯದೇವ ಆಸ್ಪತ್ರೆಗೆ ದಾವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಇತ್ತೀಚೆಗೆ ಸಂಭವಿಸುತ್ತಿರುವ ಹೃದಯಾಘಾತ ಹಾಗೂ ಸಾವುಗಳ ಕಾರಣದಿಂದಾಗಿ ನಿತ್ಯವು ಶ್ರೀ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆಯ ಮೈಸೂರು ಶಾಖೆಯಲ್ಲಿ ಶೇಕಡ 10 ರಿಂದ 20 ರಷ್ಟು ಹೃದ್ರೋಗಿಗಳ ಸಂಖ್ಯೆ ಹೆಚ್ಚಿದ್ದು, ಅಂದರೆ, 800 ರಿಂದ 1000 ಹೊರ ರೋಗಿಗಳ ಸಂಖ್ಯೆ ಹೆಚ್ಚಾಗಿರುತ್ತದೆ. ಏಕೆಂದರೆ ಮಾದ್ಯಮಗಳಲ್ಲಿ ಹೃದ್ರೋಗದ ಬಗ್ಗೆ ಹೇಳಿಕೆ ನೀಡಿರುವುದರಿಂದ, ಸಾರ್ವಜನಿಕರು ಭಯಭೀತರಾಗಿ ಚಿಕಿತ್ಸೆಗಾಗಿ ಹೆಚ್ಚಿನ ಸಂಖ್ಯೆಯಲ್ಲಿ ಬಂದಿರುತ್ತಾರೆ, ಬಂದ ರೋಗಿಗಳಿಗೆ ನುರಿತ ವೈದ್ಯರಿಂದ ಚಿಕಿತ್ಸೆ ನೀಡಲಾಗಿದೆ. |
| 2 | ಬಂದಿದಲ್ಲಿ, ಆಸ್ಪತ್ರೆಯಲ್ಲಿ ಸರ್ವರ್ ಡೌನ್ ಸಮಸ್ಯೆಯಿಂದ ಹೆಸರು ನೋಂದಾಯಿಸುವಿಕೆ ಹಾಗೂ ತಪಾಸಣೆಗೆ ಒಳಗಾಗಲು ಗಂಟೆಗಟ್ಟಲೆ ಕಾಯಬೇಕಾದ ಪರಿಸ್ಥಿತಿ ಉದ್ಭವವಾಗಿರುವುದು ನಿಜವೇ; | ಶ್ರೀ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆಯ ಮೈಸೂರು ಶಾಖೆಯಲ್ಲಿ ಹೊರ ರೋಗಿಗಳ ವಿಭಾಗದಲ್ಲಿ ಸರ್ವರ್ ಸಂಬಂಧಿತ ಯಾವುದೇ ಸಮಸ್ಯೆ ಇರುವುದಿಲ್ಲ. ರೋಗಿಗಳ ನೋಂದಣಿ ಹಾಗೂ ರೋಗ ತಪಾಸಣೆಗಳು ನಿಯಮಿತ ರೀತಿಯಲ್ಲಿ ಯಾವುದೇ ತೊಂದರೆ ಇಲ್ಲದೆ ನಡೆಯುತ್ತಿದೆ.<br><br>ಕೆಲವೊಮ್ಮೆ ತಾತ್ಕಾಲಿಕವಾಗಿ ಒಳರೋಗಿಗಳ ವಿಭಾಗದಲ್ಲಿ ಸರ್ವರ್ ಸಮಸ್ಯೆ ಉಂಟಾಗುತ್ತದೆ ಹಾಗೂ ಅದೂ ಕೂಡ ಶೀಘ್ರದಲ್ಲೇ ಪರಿಹಾರವಾಗುತ್ತದೆ. ಇದರಿಂದ ಹೃದಯ ರೋಗಿಗಳ ಚಿಕಿತ್ಸೆಗೆ ಯಾವುದೇ ಅಡಚಣೆ ಉಂಟಾಗಿರುವುದಿಲ್ಲ. |

| | | |
|---|---|---|
| 3 | ಹಾಗಿದ್ದಲ್ಲಿ, ಸರ್ವರ್ ಡೌನ್ ಸಮಸ್ಯೆಯನ್ನು ಶಾಶ್ವತವಾಗಿ ಹೋಗಲಾಡಿಸಲು ಸರ್ಕಾರ ಅಗತ್ಯ ಕ್ರಮ ಕೈಗೊಳ್ಳುವುದೇ? | ಸುಮಾರು ಒಂದು ತಿಂಗಳ ಹಿಂದೆ BSNL ಸರ್ವರ್ ಸಂಬಂಧಿತ ಸಮಸ್ಯೆ ಉಂಟಾದರೂ ಕೂಡ, ಅದು ಶೀಘ್ರವಾಗಿ ಪರಿಹಾರಗೊಂಡಿರುತ್ತದೆ. ಸರ್ವರ್ ಸಮಸ್ಯೆಯ ಸಮಯದಲ್ಲಿ ರೋಗಿಗಳ ಚಿಕಿತ್ಸೆಗೆ ಯಾವುದೇ ಅಡಚಣೆ ಉಂಟಾಗಿರುವುದಿಲ್ಲ ಹಾಗೂ ರೋಗಿಗಳಿಗೆ ಸಮಯಕ್ಕೆ ಸರಿಯಾದ ಚಿಕಿತ್ಸೆಯನ್ನು ನೀಡಲಾಗಿದೆ ಮತ್ತು ಈಗ ಸರ್ವರ್ ಸಂಬಂಧಿತ ಯಾವುದೇ ಸಮಸ್ಯೆ ಇರುವುದಿಲ್ಲ ಹಾಗೂ ಎಲ್ಲವು ಸರಾಗವಾಗಿ ನಡೆಯುತ್ತಿದೆ. |

ಸಂಖ್ಯೆ:ಎಂಇಡಿ 458 ಎಂಎಸ್ಎಫ್ 2025

**(ಡಾ. ಶರಣಪ್ರಕಾಶ ಆರ್. ಪಾಟೀಲ)**

ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವರು